ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೆರಡನೆಯ ಅಧಿವೇಶನ
ಶುಕ್ರವಾರ, ದಿನಾಂಕ: 11ನೇ ಡಿಸೆಂಬರ್, 2020

ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಅನುಷ್ಠಾನ ಕುರಿತು

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

408(548) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) 2020-21ನೇ ಸಾಲಿನಲ್ಲಿ ಮಂಡ್ಯ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವತಿಯಿಂದ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಕೋವಿಡ್-19ರ ಹಿನ್ನೆಲೆಯಲ್ಲಿ ಬಡವರಿಗೆ ಕೂಲಿ ನೀಡುವ ಯೋಜನೆಯಡಿಯಲ್ಲಿ ಪಂಚಾಯಿತಿವಾರು ಕ್ರಿಯಾ ಯೋಜನೆ ರೂಪಿಸಲಾಗಿದೆಯೇ; ರೂಪಿಸಿದ್ದಲ್ಲಿ, ತಾಲ್ಲೂಕುವಾರು ಮತ್ತು ಪಂಚಾಯಿತಿವಾರು ಎಷ್ಟು ಮೊತ್ತದವರೆಗೆ ಕ್ರಿಯಾ ಯೋಜನೆ ತಯಾರಿಸಿದೆ; (ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ನಾಗಮಂಗಲ ತಾಲ್ಲೂಕಿನಲ್ಲಿ ಈವರೆವಿಗೂ ಈ ಸಂಬಂಧ ಕ್ರಿಯಾ ಯೋಜನೆ ಅನುಷ್ಠಾನ ಆಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) 2020-21ನೇ ಸಾಲಿನಲ್ಲಿ ಜಿಲ್ಲಾ ಪಂಚಾಯತ್ ಇಂಜನಿಯರಿಂಗ್ ವಿಭಾಗದಿಂದ ನಾಗಮಂಗಲ ತಾಲ್ಲೂಕಿನಲ್ಲಿ ಈವರೆವಿಗೂ ಯಾವ ಯಾವ ಕಾರ್ಯಕ್ರಮಗಳು ಚಾಲ್ತಿಯಲ್ಲಿವೆ; (ವಿವರ ನೀಡುವುದು)

(ಈ) ನಾಗಮಂಗಲ ತಾಲ್ಲೂಕಿನ ದೇವಲಾಪುರ ಹೋಬಳೀ ಲಕ್ಕೇಗೌಡನ ಕೊಪ್ಪಲಿನಿಂದ ದೊಂದೆಮಾದಹಳ್ಳಿಗೆ ಸಂಪರ್ಕ ಕಲ್ಪಿಸುವ ರಸ್ತೆ ಯಾವ ಯೋಜನೆಯಲ್ಲಿ ಮಂಜೂರಾಗಿದೆ; ಸದರಿ ಕಾಮಗಾರಿಯನ್ನು ಯಾರು ನಿರ್ವಹಿಸುತ್ತಿದ್ದಾರೆ ಮತ್ತು ಯಾವ ಹಂತದಲ್ಲಿದೆ;

(ಉ) ಇದೇ ಕಾಮಗಾರಿ ಕಾಡಾ ಯೋಜನೆಯಿಂದಲೂ ಮಂಜೂರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಒಂದೇ ಕಾಮಗಾರಿಗೆ ಎರಡು ಇಲಾಖೆಗಳಿಂದ ಕಾಮಗಾರಿ ಮಂಜೂರು ಮಾಡಿರುವ ಇಲಾಖಾ ಅಧಿಕಾರಿಗಳು ಮತ್ತು ನಿರ್ವಹಿಸುತ್ತಿರುವ ಗುತ್ತಿಗೆದಾರರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ?